ಕಚ್ಚಾ ತಾಳೆ ಎಣ್ಣೆ ಆಮದು ಸುಂಕ ಶೇ 5ಕ್ಕೆ ಇಳಿಕೆ ಕಡಿತ

ನವದೆಹಲಿ: ಅಡುಗೆ ತೈಲದರ ಮತ್ತಷ್ಟು ಇಳಿಕೆಯಾಗುವ ಸಾಧ್ಯತೆ ಇದೆ. ಕೇಂದ್ರ ಸರಕಾರ ಕಚ್ಚಾ ತಾಳೆ ಎಣ್ಣೆ ಆಮದು ಸುಂಕ ಕಡಿತ ಗೊಳಿಸಿದೆ. ದೇಶಿ ಗ್ರಾಹಕರಿಗೆ ಮತ್ತು ಸಂಸ್ಕರಣಾಗಾರರಿಗೆ ನೆರವಾಗುವ ಉದ್ದೇಶದೊಂದಿಗೆ, ಕಚ್ಚಾ ತಾಳೆ ಎಣ್ಣೆಯ ಆಮದು ಸುಂಕವನ್ನು ಶೇ 7.5 ರಿಂದ ಶೇ 5ಕ್ಕೆ ಇಳಿಕೆ ಮಾಡಲಾ ಗಿದೆ ಎಂದು ಕೇಂದ್ರ ಸರಕಾರ ತಿಳಿಸಿದೆ. ತಾಳೆ ಎಣ್ಣೆ ಆಮದಿನ ಮೇಲೆ ವಿಧಿಸಲಾಗುತ್ತಿರುವ ಕೃಷಿ ಮೂಲಸೌಕರ್ಯ ಮತ್ತು ಅಭಿವೃದ್ಧಿ ತೆರಿಗೆಯಲ್ಲಿ (ಎಐಡಿಸಿ) ಕಡಿತ ಮಾಡಲಾಗಿದ್ದು, ಇದರಿಂದ ಕಚ್ಚಾ ತಾಳೆ ಎಣ್ಣೆ ಮತ್ತು ಸಂಸ್ಕರಿತ ತಾಳೆ ಎಣ್ಣೆ ನಡುವಣ ತೆರಿಗೆ ಅಂತರ ಹೆಚ್ಚಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

15-02-2022 Vsv Pg 08

ರೈತ ಸಿರಿ ಯೋಜನೆ: 9.85 ಕೋಟಿ ಪಾವತಿ

ಬೆಂಗಳೂರು: 2021-22ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಆಧಾರದ ಮೇಲೆ ರೈತ ಸಿರಿ ಯೋಜನೆಯಡಿ ಮುಂಗಾರು ಹಂಗಾಮಿನಲ್ಲಿ 27888 ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಬೆಳೆಯಲಾಗಿದೆ. ಇದುವರೆಗೆ 13758 ರೈತರಿಗೆ ಒಟ್ಟು 9.85 ಕೋಟಿ ರೂ. ಪ್ರೋತ್ಸಾಹಧನ ಪಾವತಿಸಲಾಗಿದೆ. ಉಳಿದ ರೈತರಿಗೆ ಪ್ರೋತ್ಸಾಹಧನ ಪಾವತಿ ಪ್ರಗತಿಯಲ್ಲಿದೆ. ಪತ್ರಿಕಾ ಪ್ರಕಟಣೆ ಮೂಲಕ ಮಾಹಿತಿ ನೀಡಿರುವ ಕೃಷಿ ಸಚಿವ ಬಿ.ಸಿ.ಪಾಟೀಲ್ ಅವರು, ರಾಜ್ಯದಲ್ಲಿ ಸಿರಿಧಾನ್ಯ ಪ್ರದೇಶವನ್ನು ವಿಸ್ತರಿಸುವ ನಿಟ್ಟಿನಲ್ಲಿ ರೈತ ಸಿರಿ ಯೋಜನೆಯಲ್ಲಿ ಸಾವಯವ ಮತ್ತು ಸಾಂಪ್ರದಾಯಿಕವಾಗಿ ಬೆಳೆಯುವ ಸಿರಿಧಾನ್ಯಗಳಾದ ನವಣೆ, ಹಾರಕ, ಸಾಮೆ, ಕೊರಲೆ, ಬರಗು ಮತ್ತು ಊದು ಬೆಳೆಗಳನ್ನು ಬೆಳೆಯುವ ರೈತರಿಗೆ ಪ್ರತಿ ಹೆಕ್ಟೇರ್‌ಗೆ 10 ಸಾವಿರ ರೂ.ನಂತೆ ಗರಿಷ್ಠ ಎರಡು ಹೆಕ್ಟೇರ್‌ಗೆ ಸೀಮಿತವಾಗುವಂತೆ ಡಿಬಿಟಿ ಮೂಲಕ ಪ್ರೋತ್ಸಾಹಧನ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.



15-02-2022 Hd Pg 03

For more information visit
University Library Website
Web - uasbagrilibindia.org
E-mail- librarian@uasbangalore.edu.in